# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು -02.

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/08 /2022-23 ದಿನಾಂಕ: 20-12-2022.

O/o. Joint Director Town Planning (South)

**ಅಂತಿಮ ಪ್ರಾರಂಭಿಕ ಪ್ರಮಾಣ ಪತ್ರ**

ವಿಷಯ: ಆಸ್ತಿ ಸಂಖ್ಯೆ 939, ಸರ್ವೆ ನಂ. 55, ಸಿಂಗಸಂದ್ರ, ವಾರ್ಡ್ ನಂ. 191, ಬೊಮ್ಮನಹಳ್ಳಿ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ (ಅಂತಿಮ) ನೀಡುವ ಬಗ್ಗೆ.

ಉಲ್ಲೇಖ: 1) ತಮ್ಮ ಮನವಿ ಪತ್ರ ದಿನಾಂಕ: 30-09-2022.

2) ಕಟ್ಟಡದ ನಕ್ಷೆ ಮಂಜೂರಾತಿ ಎಲ್.ಪಿ ಸಂಖ್ಯೆ: BBMP/ Addl.Dir/JD South/LP/ 0021/19-20 ದಿನಾಂಕ: 03-02-2021.

3) ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಿರುವ ದಿನಾಂಕ: 23-09-2021.

4) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 07-12-2022.

*****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಮನವಿಯಲ್ಲಿ ಆಸ್ತಿ ಸಂಖ್ಯೆ 939, ಸರ್ವೆ ನಂ. 55, ಸಿಂಗಸಂದ್ರ, ವಾರ್ಡ್ ನಂ. 191, ಬೊಮ್ಮನಹಳ್ಳಿ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ತಳ + ನೆಲ + ಮೇಲಿನ 4 ಅಂತಸ್ತುಗಳ 100 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ (ಅಂತಿಮ) ನೀಡಲು ಕೋರಿರುತ್ತಾರೆ. ಉಲ್ಲೇಖ (2) ರಂತೆ ಸದರಿ ಕಟ್ಟಡಕ್ಕೆ ಈ ಕಛೇರಿಯಿಂದ ಎಲ್.ಪಿ. ಸಂಖ್ಯೆ: BBMP/ Addl.Dir/JD South/LP/0021/19-20 ದಿನಾಂಕ: 10-02-2021 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಉಲ್ಲೇಖ (3) ರಂತೆ ತಳ + ನೆಲ + ಮೇಲಿನ 4 ಅಂತಸ್ತುಗಳ 98 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡದ ಭಾಗಕ್ಕೆ ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗಿರುತ್ತದೆ.

ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ (ಅಂತಿಮ) ನೀಡುವ ಪ್ರಸ್ತಾವನೆಗೆ ಉಲ್ಲೇಖ (4) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರು ಅನುಮೋದಿಸಿದ ಮೇರೆಗೆ ಪ್ರಾರಂಭಿಕ ಪ್ರಮಾಣ ಪತ್ರ (ಅಂತಿಮ) ನೀಡುವ ಸಂಬಂಧ ಅಗತ್ಯ ಶುಲ್ಕವಾದ ರೂ. 5,42,000/- ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000054 ದಿನಾಂಕ: 15-12-2022 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತಿಗೊಳಪಡಿಸಿ ಪ್ರಾರಂಭಿಕ ಪ್ರಮಾಣ ಪತ್ರ (ಅಂತಿಮ) ವನ್ನು ನೀಡಲಾಗಿದೆ.

1) ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

(2) Copies

21/12/22

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

20/12 15/20/12 20/12/2022

2) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ತೊಂದರೆ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರ ವಸತಿಗಾಗಿ ತಾತ್ಕಾಲಿಕ ಶೆಡ್ ಮತ್ತು ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3) ನಕ್ಷೆ ಮಂಜೂರಾತಿಯ ಸಿಂಧುತ್ವವು ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

4) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಮಂಜೂರಾತಿ ನೀಡುವ ಪ್ರಾಧಿಕಾರದವರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5) ಅಭಿವೃದ್ಧಿದಾರರು / ಮಾಲೀಕರು / ವಾಸ್ತುಶಿಲ್ಪಿಯವರು ನಕ್ಷೆ ಮಂಜೂರಾತಿ ನೀಡಿದ ಸಮಯದಲ್ಲಿ ವಿಧಿಸಿರುವ ಷರತ್ತುಗಳಿಗೆ ಬದ್ಧರಿರತಕ್ಕದ್ದು.

6) ಅಭಿವೃದ್ಧಿದಾರರು / ಮಾಲೀಕರು / ವಾಸ್ತುಶಿಲ್ಪಿಯವರು ಪ್ರಾರಂಭಿಕ ಪ್ರಮಾಣಪತ್ರ ಅನುಮೋದಿಸುವ ಸಮಯದಲ್ಲಿ ವಿಧಿಸಿರುವ ವಿಶೇಷ ಷರತ್ತಿಗೆ ಬದ್ಧರಿರತಕ್ಕದ್ದು.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s. M.R. Group Rep by its Partners
A. Lakshminarayana Naidu and S.J. Janardhan
# 30, Sai Nilayam, 1st Floor, 1st B Main,
Vivenkanandanagar, Kathriguppe, B.S.K. 3rd Stage,
Bangalore – 560 085.

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ದಕ್ಷಿಣ ವಲಯ) ವಿಭಾಗ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೇಗೂರು ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

20/12

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

20/12 20/12 20/12/2022